# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 983 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24/02/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕಾರ್ಮಿಕರಿಗೆ ನೀಡಲಾಗುತ್ತಿರುವ ವೈದ್ಯಕೀಯ ಸಹಾಯಧನ, ಪ್ರಮುಖ ಕಾಯಿಲೆಯಿಂದ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚದ ಸಂಪೂರ್ಣ ಮಾಹಿತಿಯೊಂದಿಗೆ ವಿವರಗಳನ್ನು ನೀಡುವುದು. | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಂಡಳಿಯ ಫಲಾನುಭವಿಗಳ ಆರೋಗ್ಯ ದೃಷ್ಟಿಯಿಂದ ಕಟ್ಟಡ ಮತ್ತು ಇತರೆ ನಿರ್ಮಾಣ (ಕಾರ್ಮಿಕರ ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು, 2006 ರ ನಿಯಮಾನುಸಾರ ಈ ಕೆಳಕಂಡ ವಿವಿಧ ರೀತಿಯ ವೈದ್ಯಕೀಯ ಸಹಾಯ ಧನ ನೀಡಲಾಗುತ್ತಿದೆ:-<br>1. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ **ರೂ.20,000/-** **ವರೆಗೆ.**<br>2. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**<br>ಅಪಘಾತಕ್ಕೊಳಗಾಗಿ ಚಿಕಿತ್ಸೆ ಪಡೆದಿದ್ದಲ್ಲಿ ಪ್ರಮುಖ ವೈದ್ಯಕೀಯ ಸಹಾಯಧನ ಸೌಲಭ್ಯದಡಿ ರೂ.2,00,000/-ಗಳ ವರೆಗೆ ಸಹಾಯ ಧನ ಪಡೆಯಬಹುದು. |

| | | |
|---|---|---|
| ಆ) | ಚಿಕಿತ್ಸಾ ವೆಚ್ಚಗಳನ್ನು ಅವೈಜ್ಞಾನಿಕವಾಗಿ ಅತೀ ಕಡಿಮೆ ದರ ನಿಗಧಿ ಮಾಡಿರುವುದು ಮತ್ತು ಮರುಪಾವತಿ ಮಾಡುವಲ್ಲಿ ಸಾಕಷ್ಟು ವ್ಯತ್ಯಯ ಹಾಗೂ ವಿಳಂಬವಾಗುತ್ತಿರುವುದರಿಂದ ಕಾರ್ಮಿಕರು ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ನಿಯಮಗಳು, 2006 ರ ನಿಯಮ.48 ರಡಿ ಫಲಾನುಭವಿಗಳಿಂದ ಚಿಕಿತ್ಸೆ ವೆಚ್ಚವನ್ನು ಕೋರಿ ಸಲ್ಲಿಸುವ ಅರ್ಜಿಗಳನ್ನು ಸಿಜಿಹೆಚ್‌ಎಸ್ ದರಗಳನ್ವಯ ಪರಿಶೀಲಿಸಿ ವಿಲೇವಾರಿ ಮಾಡುವಂತೆ ಪ್ರಾವಧಾನ ರೂಪಿಸಲಾಗಿರುತ್ತದೆ. ಆದರಂತೆ ಸಿಜಿಹೆಚ್‌ಎಸ್ ದರಗಳನ್ವಯ ವೈಧ್ಯಕೀಯ ಸಹಾಯ ಧನ ನೀಡಲು ಕ್ರಮ ವಹಿಸಲಾಗುತ್ತಿದೆ.<br>ಅರ್ಜಿಗಳ ಶೀಘ್ರವಿಲೇವಾರಿಗಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿ, ಆನ್ ಲೈನ್ ಮೂಲಕವೇ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಜಮಾ ಮಾಡಲಾಗುತ್ತಿದೆ. ಅಲ್ಲದೇ, ಶೀಘ್ರ ವಿಲೇವಾರಿಗಾಗಿ ಮಂಜೂರಾತಿ ಅಧಿಕಾರವನ್ನು ಜಿಲ್ಲಾ ಕಾರ್ಮಿಕ ಅಧಿಕಾರಿಗಳಿಗೆ ಹಸ್ತಾಂತರಿಸಲಾಗಿದೆ. |
| ಇ) | ಬಂದಿದ್ದಲ್ಲಿ, ಈ ಸಂಬಂಧ ಕಾರ್ಮಿಕರಿಗೆ ನ್ಯಾಯ ಒದಗಿಸಲು ಸರ್ಕಾರ ಇದುವರೆಗೆ ಕೈಗೊಂಡ ಕ್ರಮವೇನು; | |
| ಈ) | ವೈದ್ಯಕೀಯ ಸಹಾಯಧನ, ಪ್ರಮುಖ ಕಾಯಿಲೆಗಳ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚವನ್ನು ಪೂರ್ಣವಾಗಿ ಕಾರ್ಮಿಕರಿಗೆ ಪಾವತಿಸಲು ಅಥವಾ ನಗದು ರಹಿತ ವೈದ್ಯಕೀಯ ಚಿಕಿತ್ಸಾ ಸೇವೆಯನ್ನು ಜಾರಿ ಮಾಡಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ? | ಪ್ರಸ್ತುತ ವೈದ್ಯಕೀಯ ಸಹಾಯಧನ, ಪ್ರಮುಖ ವೈದ್ಯಕೀಯ ವೆಚ್ಚವನ್ನು ಪೂರ್ಣವಾಗಿ ಕಾರ್ಮಿಕರಿಗೆ ಪಾವತಿಸಲು ಅಥವಾ ನಗದು ರಹಿತ ವೈದ್ಯಕೀಯ ಸೇವೆಯನ್ನು ಜಾರಿ ಮಾಡುವ ಪ್ರಸ್ತಾವನೆ ಮಂಡಳಿಯಲ್ಲಿ ಇರುವುದಿಲ್ಲ. |

**ಕಾಇ 122 ಎಲ್‌ಇಟಿ 2023**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು